## 105. ಉಪನ್ಯಾಸಕರ ವರ್ಗಾವಣೆಗೆ ಹೊಸ ನಿಯಮ

ಜಾರಿಯಲ್ಲಿರುವ ಉಪನ್ಯಾಸಕರ ವರ್ಗಾವಣೆ ನಿಯಮಗಳಿಗೆ ಸೂಕ್ತ ತಿದ್ದುಪಡಿ ಮೂಲಕ ಬದಲಾವಣೆ ತರಲಾಗುವುದು ಹಾಗೂ "ಈಗಿರುವ 2016ರ ವರ್ಗಾವಣೆ ಕಾಯಿದೆಯಲ್ಲಿ ಹಲವಾರು ದೋಷಗಳಿದ್ದ ಕಾರಣ ಇಡೀ ಕಾಯಿದೆಯನ್ನೇ ವಾಪಸ್ಸು ಪಡೆದು ಹೊಸ ನಿಯಮಗಳನ್ನು ಸರಳವಾಗಿ ರೂಪಿಸಲಾಗುವುದು. ವಿಶ್ವವಿದ್ಯಾಲಯಗಳಲ್ಲಿನ ಆಡಳಿತಕ್ಕೆ ಮತ್ತಷ್ಟು ಚುರುಕು ನೀಡುವ ಉದ್ದೇಶದಿಂದ ಎಲ್ಲ ವಿವಿಗಳ ರಿಜಿಸ್ಟ್ರಾರ್ ಹುದ್ದೆಗಳಿಗೆ ಐಎಎಸ್ ಅಥವಾ ಕೆಎಎಸ್ ಅಧಿಕಾರಿಗಳನ್ನು ನೇಮಕ ಮಾಡಲು ಸುಗ್ರೀವಾಜ್ಞೆ ತರಲಾಗಿದ್ದು, ಅಧಿವೇಶನದಲ್ಲಿಯೇ ಒಪ್ಪಿಗೆ ಪಡೆಯಲಾಗುವುದು" ಎಂದು ಉಪ ಮುಖ್ಯಮಂತ್ರಿ ಡಾ: ಸಿ.ಎನ್. ಅಶ್ವತ್ಥನಾರಾಯಣ ತಿಳಿಸಿದ್ದಾರೆ.

ಐಎಎಸ್ ಅಥವಾ ಕೆಎಎಸ್ ಅಧಿಕಾರಿಗಳನ್ನು ತರುವುದು ಉತ್ತಮ ಯೋಜನೆ. ಆದರೆ, ಐಪಿಎಸ್ ಮತ್ತು ಐಎಫ್ಎಸ್ ಅಧಿಕಾರಿಗಳನ್ನು ನೇಮಕ ಮಾಡಬೇಡಿ. ವಿವಿಗಳಲ್ಲಿ ಅಧ್ಯಾಪಕರಿಂದ ಹಿಡಿದು ಎಲ್ಲ ಹಂತಗಳ ನೇಮಕಕ್ಕೆ ಒಂದು ಕೇಂದ್ರೀಕೃತ ಸೆಲ್ ಮಾಡಿದಾಗ ಎಲ್ಲ ವಿವಿಗಳಲ್ಲೂ ರಾಜಕಾರಣಿಗಳ ಹಸ್ತಕ್ಷೇಪ ಬಹುತೇಕ ನಿಲ್ಲುತ್ತದೆ ಹಾಗೂ ಕೋವಿಡ್ ಹಿನ್ನೆಲೆಯಲ್ಲಿ ಡಿಜಿಟಲ್ ಕಲಿಕಾ ವ್ಯವಸ್ಥೆಯನ್ನು ಜಾರಿಗೆ ತರಲಾಗಿದ್ದು, ಅದು ನಿರೀಕ್ಷೆಗೂ ಮೀರಿ ಯಶಸ್ವಿಯಾಗಿದೆ ಎಂದು ಪರಿಷತ್ ಸದಸ್ಯರಾದ ವೈ.ಎ. ನಾರಾಯಣ ಸ್ವಾಮಿ ತಿಳಿಸಿದರು.

ಖಾಸಗಿ ಶಾಲೆಗಳ ನವೀಕರಣ, ಕೊರೋನಾ ವೇಳೆಯ ಸಮಸ್ಯೆಗಳನ್ನು ಪರಿಹರಿಸಲು ಅಧಿಕಾರಿಗಳ ಸಭೆಯನ್ನು ನಡೆಸಿ, ಅಗತ್ಯ ವಿನಾಯಿತಿ ನೀಡಲು ಸೂಚಿಸಲಾಗುವುದು ಎಂದು ಸಚಿವ ಎಸ್. ಸುರೇಶ್‌ಕುಮಾರ್ ತಿಳಿಸಿದ್ದಾರೆ. ಕೊರೋನಾ ಸಂದರ್ಭದಲ್ಲಿ ಖಾಸಗಿ ಶಾಲೆಗಳ ಸಮಸ್ಯೆಗಳ ಅರಿವಿದ್ದು, ಶೈಕ್ಷಣಿಕ ಸಾಲಿಗೆ ಸಂಬಂಧಿಸಿದ ಅನುಮತಿಗಳನ್ನು ನೀಡುವಾಗ ನಿಯಮಾವಳಿಗಳನ್ನು ಸರಳೀಕರಣಗೊಳಿಸುವ ಅನಿವಾರ್ಯತೆ ಇದೆ. ರಾಷ್ಟ್ರೀಯ ಶಿಕ್ಷಣ ನೀತಿಯನ್ನು ಅಳವಡಿಸಿಕೊಳ್ಳುವ ಸಂಬಂಧ ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಇಲಾಖೆ ಗಟ್ಟಿಯಾದ ಕ್ರಿಯಾ ಯೋಜನೆಯನ್ನು ರೂಪಿಸುತ್ತಿದೆ ಮಧ್ಯಾಹ್ನದ ಬಿಸಿಯೂಟ ನೌಕರರದ್ದೂ ಸಮಸ್ಯೆಗಳಿವೆ. 15 ದಿನಗಳ ಹಿಂದೆಯಷ್ಟೇ 3–4 ತಿಂಗಳ (ಜೂನ್– ಆಗಸ್ಟ್) ರೂ. 93.46 ಕೋಟಿ ಸಂಭಾವನೆಯನ್ನು ಸರ್ಕಾರ ಬಿಡುಗಡೆ ಮಾಡಿದೆ. ಕನಿಷ್ಠ ವೇತನ ಸೇರಿದಂತೆ ಹಲವು ಸಮಸ್ಯೆ ಬಗೆಹರಿಸುವ ಪ್ರಕ್ರಿಯೆ ಚಾಲ್ತಿಯಲ್ಲಿದೆ ಎಂದು ಸಚಿವರು ತಿಳಿಸಿದ್ದಾರೆ.

ಆಧಾರ:ವಿಜಯ ಕರ್ನಾಟಕ, ದಿನಾಂಕ:17.09.2020